ಪ್ರವಾಸೋದ್ಯಮ ಅಭಿವೃದ್ಧಿ ನಿಗಮದಲ್ಲಿ ಅನುಕಂಪದ ನೇಮಕಾತಿ ಬಗ್ಗೆ

ಶ್ರೀ ಆರ್. ಚೌದರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-

16 (76) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮ (ಏSಟಿಆಅ) ದಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ನಿಗಮದಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಹೆಸರು, ಹುದ್ದೆಯ ಪದನಾಮ, ತಿಂಗಳಿಗೆ ಪಡೆಯುತ್ತಿರುವ ಮಾಸಿಕ ವೇತನದೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಇ) ನಿಗಮದಲ್ಲಿ ಅನುಕಂಪದ ಆಧಾರದ ಮೇಲೆ ಕೆಲಸ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ ; ಬಾಕಿ ಉಳಿದಿರುವ ಅಭ್ಯರ್ಥಿಗಳೆಷ್ಟು ; (ವಿವರವಾಗಿ ಅರ್ಜಿ ಸಲ್ಲಿಸಿರುವ ದಿನಾಂಕ ಹಾಗೂ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಈ) ಸರ್ಕಾರ ಯಾವ ಕಾಲಮಿತಿಯೊಳಗೆ ಈ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸುವುದು ?